ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಜಮೀನುಗಳ ಪೋಡಿ ಮಾಡದಿರುವುದು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

305 (305) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಮತ್ತು ದರ್ಖಾಸ್ತು ಮಂಜೂರಾದ ಅಂಶಿಕ ಜಮೀನುಗಳ ಖಾತೆದಾರರ ಪೋಡಿ ಮಾಡದೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವುದು ಸಾಧ್ಯವಾಗದಿರುವ ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದೆ ಇರಲು ಕಾರಣಗಳೇನು;

(ಆ) ಜನ ಸಾಮಾನ್ಯರಿಗೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ನೆರವಾಗಲು ಪೋಡಿಮುಕ್ತ ಅಭಿಯಾನವನ್ನು ಯಾವಾಗ ಪ್ರಾರಂಭಿಸಲಾಯಿತು; ಈ ಅಭಿಯಾನದಂತೆ ತುಮಕೂರು ಜಿಲ್ಲೆಯಲ್ಲಿ ಭೂಮಾಪನ ಕಾರ್ಯ ಪೂರ್ಣಗೊಂಡ ಗ್ರಾಮಗಳು ಯಾವುವು; (ವಿವರಗಳನ್ನು ನೀಡುವುದು)

(ಇ) ಶಿರಾ ತಾಲ್ಲೂಕಿನಲ್ಲಿ ಭೂಮಾಪನಾ ಕಾರ್ಯ ಪೂರ್ಣಗೊಂಡ ಗ್ರಾಮಗಳಲ್ಲಿ ಖಾತೆದಾರರಿಗೆ ಪಹಣಿ ದಾಖಲಿಸಿ, ಪಹಣಿ ಪತ್ರ ನೀಡುವ ಕಾರ್ಯವನ್ನು ಪೂರ್ಣಗೊಳಿಸಲಾಗಿದೆಯೇ? (ವಿವರಗಳನ್ನು ನೀಡುವುದು)